**All India Radio: Bangalore**
**Regional Bulletin In Kannada**
**29.05.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**23.05.2025 / 6.40 p.m.**
**<><><><>**

ಮುಖ್ಯಾಂಶಗಳು

೧. ರಾಜ್ಯದ ವಿವಿಧೆಡೆ ಮಳೆ ಹಾನಿ ; ನಾಳೆ- ನಾಡಿದ್ದು ಮುಖ್ಯಮಂತ್ರಿ ಸಿದ್ಧರಾಮಯ್ಯ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳೊಂದಿಗೆ ಸಭೆ

೨. ಹುಬ್ಬಳ್ಳಿ ಗಲಭೆ ಸೇರಿ ೪೩ ಪ್ರಕರಣ ವಾಪಸ್ ಪಡೆದ ಸರ್ಕಾರದ ಆದೇಶ ರದ್ದುಗೊಳಿಸಿದ ಉಚ್ಚನ್ಯಾಯಾಲಯ

೩. ರಾಜ್ಯದ ವಿವಿಧೆಡೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನಕ್ಕೆ ಚಾಲನೆ

೪. ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಕೋರ್ ಕಮಿಟಿ ಸಭೆ-ಪಕ್ಷ ಬಲವರ್ಧನೆ ಕುರಿತಂತೆ ಸಭೆಯಲ್ಲಿ ಚರ್ಚೆ

**<><><><>**

ರಾಜ್ಯದ ವಿವಿಧೆಡೆ ಧಾರಾಕಾರ ಮಳೆಯಾಗುತ್ತಿದ್ದು ಹಲವೆಡೆ ಜನಜೀವನ ಅಸ್ತವ್ಯಸ್ತವಾಗಿದೆ. ಕೆಲವು ಜಿಲ್ಲೆಗಳಲ್ಲಿ ಅಪಾರ ಪ್ರಮಾಣದ ಬೆಳೆ ಆಸ್ತಿ ಪಾಸ್ತಿ ನಷ್ಟವಾಗಿದೆ. ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಅಧಿಕಾರಿಗಳು ಜಿಲ್ಲೆಯಲ್ಲೇ ಇರುವಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸೂಚಿಸಿದ್ದಾರೆ. ನಾಳೆ ಮತ್ತು ನಾಡಿದ್ದು ಎರಡು ದಿನಗಳ ಕಾಲ ಮುಖ್ಯಮಂತ್ರಿ ಸಿದ್ಧರಾಮಯ್ಯ ಸಭೆ ನಡೆಸಲಿದ್ದು ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಲಿದ್ದಾರೆ. ಮುಂಗಾರು ಮಳೆ

ಪರಿಸ್ಥಿತಿ ಬಗ್ಗೆ ಕೈಗೊಳ್ಳಲಾಗಿರುವ ಮುನ್ನೆಚ್ಚರಿಕಾ ಕ್ರಮಗಳ ಕುರಿತು ಚರ್ಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

<><><><>

ರಾಜ್ಯಾದ್ಯಂತ ಮಳೆ ಮುಂದುವರೆದಿದೆ.

ಕೊಡಗು ಜಿಲ್ಲೆಯಲ್ಲಿ ಸತತ ೬ ದಿನಗಳಿಂದ ಸುರಿಯುತ್ತಿರುವ  ಧಾರಾಕಾರ ಮಳೆಗೆ ಸಾಮಾನ್ಯ ಜನಜೀವನ ಸಂಪೂರ್ಣ ವ್ಯತ್ಯಯಗೊಂಡಿದೆ. ನಾಳೆಯವರೆಗೂ ಜಿಲ್ಲೆಯಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದ್ದು, ಶಾಲೆಗಳ ಪುನರಾರಂಭವನ್ನು ಶನಿವಾರದವರೆಗೆ ಮುಂದೂಡಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ.

ಉತ್ತರಕನ್ನಡ ಜಿಲ್ಲೆಯ ಕರಾವಳಿ ಹಾಗೂ ಮಲೆನಾಡು ಭಾಗಗಳಲ್ಲಿ ನಿನ್ನೆ ಸಂಜೆಯಿಂದ ವ್ಯಾಪಕ ಮಳೆ ಸುರಿಯುತ್ತಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಇಂದು ಅಂಗನವಾಡಿ ಹಾಗೂ ಶಾಲೆಗಳಿಗೆ ರಜೆ ಘೋಷಿಸಲಾಗಿದೆ. ಕಳೆದ ೨೪ ಗಂಟೆಗಳಲ್ಲಿ ಕರಾವಳಿ ತಾಲೂಕಾದ ಭಟ್ಕಳದಲ್ಲಿ ಅತೀ ಹೆಚ್ಚು ೧೧೪ ಮಿಲಿ ಮೀಟರ್ ಮಳೆ ವರದಿಯಾಗಿದೆ. ಹವಾಮಾನ ಇಲಾಖೆಯಿಂದ ರೆಡ್ ಅಲರ್ಟ್ ಘೋಷಿಸಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ ಕರಾವಳಿಯಲ್ಲಿ ಮಳೆ ಮುಂದುವರಿದಿದ್ದು, ನಾಳೆಯವರೆಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಭಾರೀ ಗಾಳಿ ಮಳೆಯ ಪರಿಣಾಮ ಅಲ್ಲಲ್ಲಿ ಹಾನಿಯೂ ಉಂಟಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಭಾರೀ ಮಳೆಯ ಸಂದರ್ಭ ಪ್ರಾಕೃತಿಕ

ವಿಕೋಪ ಸಂಭವಿಸುವ ಸಾಧ್ಯತೆ ಇರುವುದರಿಂದ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು, ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸ್ಪಷ್ಟ ಸೂಚನೆ ನೀಡಿದ್ದಾರೆ.

ಗದಗ ಜಿಲ್ಲೆಯಲ್ಲಿ ಬಹುತೇಕ ಕಡೆ ಧಾರಾಕಾರ ಮಳೆಯಾಗಿದ್ದು, ಭಾಗಶಃ ಮೋಡ ಕವಿದ ವಾತಾವರಣವಿದೆ. ರೈತರು ಮಣ್ಣಿನಲ್ಲಿ ಅತಿಯಾದ ತೇವಾಂಶವಿದ್ದಲ್ಲಿ ಬಿತ್ತುವುದನ್ನು ಮುಂದೂಡಬೇಕೆಂದು ಗದಗ ಜಿಲ್ಲಾ ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ತಾರಾಮಣಿ ಜಿ.ಎಚ್ ಪ್ರಕಟನೆಯಲ್ಲಿ ತಿಳಿಸಿದ್ದಾರೆ. ಸತತವಾಗಿ ಮಳೆ ಬಿದ್ದಿರುವದರಿಂದ ಬೆಳೆಗೆ ಅವಶ್ಯವಿರುವ ಪ್ರಮುಖ ಪೋಷಕಾಂಶಗಳಾದ ಸಾರಜನಕ, ರಂಜಕ ಮತ್ತು ಗಂಧಕಗಳು ನೀರಿನ ಜೊತೆ ಬಸಿದು ಹೋಗಿ ಪೋಷಕಾಂಶಗಳ ಕೊರತೆ ಉಂಟಾಗಬಹುದಾಗಿದೆ ಎಂದು ಅವರು ತಿಳಿಸಿದರು.

<><><><>

ಹುಬ್ಬಳ್ಳಿ ಗಲಭೆ ಪ್ರಕರಣಗಳು ಸೇರಿದಂತೆ ೪೩ ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯುವಂತೆ ರಾಜ್ಯ ಸರ್ಕಾರ ನೀಡಿದ್ದ ನಿರ್ದೇಶನವನ್ನು ಉಚ್ಚನ್ಯಾಯಾಲಯ ರದ್ದುಗೊಳಿಸಿದೆ.

ಮುಖ್ಯನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೆ.ವಿ. ಅರವಿಂದ್ ನೇತೃತ್ವದ ಹೈಕೋರ್ಟ್ ಪೀಠವು ೪೩ ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯುವ ಸರ್ಕಾರದ ಕ್ರಮಕ್ಕೆ ಆಕ್ಷೇಪ ವ್ಯಕ್ತಪಡಿಸಿದೆ.

ಹೈಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಎಲ್ಲ ಪ್ರಕರಣಗಳು ಮತ್ತೆ ಪುನರಾರಂಭಗೊಳ್ಳುವ ನಿರೀಕ್ಷೆಯಿದೆ. ಹುಬ್ಬಳ್ಳಿ ಗಲಭೆ ಪ್ರಕರಣದ ಆರೋಪಿಗಳ ವಿರುದ್ಧ ದಾಖಲಾಗಿರುವ ಪ್ರಕರಣಗಳ

ಜೊತೆಗೆ ರೈತ ಮುಖಂಡರು ಮತ್ತು ಕನ್ನಡ ಕಾರ್ಯಕರ್ತರ ವಿರುದ್ಧದ ಪ್ರಕರಣಗಳನ್ನು ಹಿಂಪಡೆಯಲು ಸರ್ಕಾರ ನಿರ್ಧರಿಸಿತ್ತು.

<><><><>

ರಾಜ್ಯದ ವಿವಿಧೆಡೆ ಇಂದು ಕೇಂದ್ರ ಸರ್ಕಾರ ಆರಂಭಿಸಿರುವ ವಿಕಸಿತ ಕೃಷಿ ಸಂಕಲ್ಪ ಅಭಿಯಾನಕ್ಕೆ ಚಾಲನೆ ದೊರೆಯಿತು.

ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ ಮತ್ತು ಕೃಷಿ ವಿಜ್ಞಾನ ಕೇಂದ್ರ ತುಮಕೂರು ಸಂಯುಕ್ತ ಆಶ್ರಯದಲ್ಲಿ ಇಂದು ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಹಿರೇಹಳ್ಳಿ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ. ಲೋಗಾನಂದ ಮಾತನಾಡಿ, ಕೃಷಿ ವಿಜ್ಞಾನಿಗಳು ರೈತರ ಮನೆ ಬಾಗಿಲಿಗೆ ಬಂದು ಕೃಷಿ ತಂತ್ರಜ್ಞಾನಗಳನ್ನು ರೈತರಿಗೆ ತಿಳಿಸಿಕೊಡಲಿದ್ದಾರೆ ಎಂದು ಮಾಹಿತಿ ನೀಡಿದರು.

ಶಿವಮೊಗ್ಗದಲ್ಲಿ ಇಂದಿನಿಂದ ಜಿಲ್ಲೆಯಾದ್ಯಂತ ೧೫ ದಿನಗಳ ಕಾಲ ಸಂಚರಿಸಲಿರುವ "ವಿಕಸಿತ ಕೃಷಿ ಸಂಕಲ್ಪ ಅಭಿಯಾನ-೨೦೨೫" ರಥಯಾತ್ರೆಗೆ ಶಿವಮೊಗ್ಗ ತಾಲ್ಲೂಕು ಹೊಳಲೂರು ಗ್ರಾಮದಲ್ಲಿ ಚಾಲನೆ ದೊರೆತಿದೆ.

ಮೈಸೂರಿನ ಸುತ್ತೂರಿನಲ್ಲಿ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನಕ್ಕೆ ವಿದ್ಯುಕ್ತವಾಗಿ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಸುತ್ತೂರಿನ ಐಸಿಎಆರ್ ಜೆಎಸ್ಎಸ್ ಕೃಷಿ ವಿಜ್ಞಾನ ಕೇಂದ್ರ ಮುಖ್ಯಸ್ಥ ಡಾ. ಬಿ.ಎನ್. ಜ್ಞಾನೇಶ್ ಅಭಿಯಾನದ

ಕುರಿತು ಮಾಹಿತಿ ನೀಡಿದರು. ಕೋಲಾರ ಜಿಲ್ಲೆಯಲ್ಲಿ ಕೇಂದ್ರ ಸರ್ಕಾರ, ಕೃಷಿ ವಿಶ್ವವಿದ್ಯಾಲಯ, ಕೃಷಿ ವಿಜ್ಞಾನ ಕೇಂದ್ರ, ಕೃಷಿ, ತೋಟಗಾರಿಕೆ, ರೇಷ್ಮೆ ಪಶುಸಂಗೋಪನೆ ಇಲಾಖೆ ಆಯೋಜಿಸಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನಕ್ಕೆ ಸರ್ಕಾರದ ಕಾರ್ಯದರ್ಶಿ ಡಾ. ಏಕ್ ರೂಪ್ ಕೌರ್ ಚಾಲನೆ ನೀಡಿದರು. ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಶಿವಾನಂದ ಹೊಂಗಲ್ ಮಾತನಾಡಿ, ೧೫ ದಿನಗಳ ಕಾಲ ೬೦ ಗ್ರಾಮಪಂಚಾಯಿತಿಗಳಲ್ಲಿ ಪ್ರತಿದಿನ ೨ ತಂಡಗಳಲ್ಲಿ ೧೦ ಜನ ವಿದ್ಯಾರ್ಥಿಗಳು ಗ್ರಾಮಗಳಿಗೆ ಭೇಟಿ ನೀಡಿ ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಕಾರ್ಯ ಮಾಡಲಿದ್ದಾರೆ ಎಂದು ತಿಳಿಸಿದ್ದಾರೆ.  "ವಿಜ್ಞಾನಿಗಳ ನಡೆ ರೈತರ ಕಡೆ" ಅಭಿಯಾನದ ಮೂಲಕ ಸರ್ಕಾರ ರೈತರಿಗೆ ರೂಪಿಸಿರುವ ಯೋಜನೆಗಳನ್ನು ತಲುಪಿಸುವ ಕಾರ್ಯ ಮಾಡಲಾಗುವುದು ಎಂದು ಹೇಳಿದ್ದಾರೆ.

<><><><>

ಬೆಂಗಳೂರಿನ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಕೋರ್ ಕಮಿಟಿ ಸಭೆ ನಡೆಯಿತು. ಸಭೆಯಲ್ಲಿ ರಾಜ್ಯ ಉಸ್ತುವಾರಿಗಳಾದ ಡಾ ರಾಧಾಮೋಹನ್ ದಾಸ್ ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ ವೈ ವಿಜಯೇಂದ್ರ , ಮಾಜಿ ಮುಖ್ಯಮಂತ್ರಿಗಳಾದ  ಬಿಎಸ್ ಯಡಿಯೂರಪ್ಪ, ಡಿ ವಿ ಸದಾನಂದಗೌಡ ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು. ರಾಜ್ಯದಲ್ಲಿ ಪಕ್ಷ ಬಲವರ್ಧನೆ ಕುರಿತಂತೆ ಸಭೆಯಲ್ಲಿ ಚರ್ಚೆ ನಡೆಸಲಾಯಿತು.

ಇದಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಕಾಂಗ್ರೆಸ್ ಸರ್ಕಾರ ಬಿಜೆಪಿ ಪಕ್ಷದ ಪರಿಶಿಷ್ಠ ನಾಯಕರನ್ನು, ಹಿಂದುಳಿದ ವರ್ಗಗಳ ಮುಖಂಡರನ್ನು

ಗುರಿಯಾಗಿಸಿ ಪ್ರಕರಣ ದಾಖಲಿಸುವ ಮೂಲಕ ಬೆದರಿಕೆ ಒಡ್ಡುತ್ತಿದೆ ಎಂದು ಆರೋಪಿಸಿದ್ದಾರೆ. ಕಾಂಗ್ರೆಸ್ ಸರ್ಕಾರದ ಈ ಗೊಡ್ಡು ಬೆದರಿಕೆಗಳಿಗೆ ನಾವು ಹೆದರುವುದಿಲ್ಲ ಎಂದು ತಿಳಿಸಿದ್ದಾರೆ.

<><><><>

ವಿದ್ಯುತ್ ಸಂಪರ್ಕಗಳಿಗೆ ಸ್ವಾಧೀನ ಪತ್ರ ಕಡ್ಡಾಯಗೊಳಿಸಿರುವುದರಿಂದ ಆಗುತ್ತಿರುವ ಸಮಸ್ಯೆ ಕುರಿತು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಕೈಗೊಂಡು ಶೀಘ್ರದಲ್ಲೇ ಪರಿಹಾರ ಕಂಡುಕೊಳ್ಳಲಾಗುವುದು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸುಪ್ರೀಂ ಕೋರ್ಟ್ ಆದೇಶದಂತೆ ಸರ್ಕಾರ ವಿದ್ಯುತ್ ಸಂಪರ್ಕಗಳಿಗೆ ಸ್ವಾಧೀನ ಪತ್ರ ಕಡ್ಡಾಯಗೊಳಿಸಿದೆ. ಇದರಿಂದ ಉದ್ಭವವಾಗಿರುವ ಸಮಸ್ಯೆ ನಿವಾರಿಸಲು ಬೈಲಾ ತಿದ್ದುಪಡಿ ಮಾಡಬೇಕಿದೆ. ಯಾವ ರೀತಿ ಪರಿಹಾರ ಕಂಡುಕೊಳ್ಳಬಹುದು ಎಂಬ ಬಗ್ಗೆ ವರದಿ ಸಲ್ಲಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಸೂಚಿಸಲಾಗಿದ್ದು, ವರದಿ ಸಲ್ಲಿಸಿದ ಕೂಡಲೇ ಸಚಿವ ಸಂಪುಟದಲ್ಲಿ ನಿರ್ಣಯ ಕೈಗೊಂಡು ಸಮಸ್ಯೆ ನಿವಾರಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

<><><><>

ಅತಿವೃಷ್ಟಿಯಿಂದ ಉಂಟಾಗುವ ಪ್ರವಾಹ, ಅದರಿಂದಾಗುವ ಇತರ ಸಮಸ್ಯೆಗಳನ್ನು ಸಮರ್ಪಕವಾಗಿ ನಿರ್ವಹಿಸಲು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವುದರೊಂದಿಗೆ ತ್ವರಿತವಾಗಿ ಸ್ಪಂದಿಸಿ, ಯಾವುದೇ ಜನ, ಜಾನುವಾರುಗಳಿಗೆ ಹಾನಿಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಮಳೆಹಾನಿ ಬಗ್ಗೆ ಚರ್ಚಿಸಲು ಅಧಿಕಾರಿಗಳೊಂದಿಗೆ ಆನ್‌ಲೈನ್ ಮೂಲಕ ಸಭೆ ನಡೆಸಿ ಮಾತನಾಡಿದ ಅವರು, ಈ ಬಾರಿ ಅವಧಿಗೆ ಮುನ್ನವೇ ಜಿಲ್ಲೆಯಾದ್ಯಂತ ಪೂರ್ವ ಮುಂಗಾರು ನಿರೀಕ್ಷೆಗಿಂತ ಹೆಚ್ಚಾಗಿದೆ. ಮಳೆಗಾಲದಲ್ಲಿ ಉಂಟಾಗುವ ಪ್ರವಾಹ, ಅತಿವೃಷ್ಠಿ ಸಮಸ್ಯೆಗಳನ್ನು ಎದುರಿಸಲು ಅಗತ್ಯವಾಗಿರುವ ಎಲ್ಲಾ ರೀತಿಯ ಪರಿಕರಗಳನ್ನು ಸನ್ನದ್ಧ ಸ್ಥಿತಿಯಲ್ಲಿ ಇಟ್ಟುಕೊಂಡು ಸಮರ್ಪಕವಾಗಿ ಎದುರಿಸಲು ಸಿದ್ಧರಾಗಿರಬೇಕು ಎಂದು ಸೂಚನೆ ನೀಡಿದರು.

<><><><>

'ಮಳೆ ನೀರು ಸರಾಗವಾಗಿ ಹರಿಯಲು ಅಡ್ಡವಿರುವ ಕಟ್ಟಡಗಳನ್ನು ವಿಪತ್ತು ನಿರ್ವಹಣೆ ಕಾಯ್ದೆಯಡಿ ತೆರವುಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಹೆಬ್ಬಾಳದ ಬಳಿ ಮಳೆ ಪ್ರವಾಹಕ್ಕೆ ಕಾರಣವಾದ ರಾಜಕಾಲುವೆ ಹಾಗೂ ನಾಲೆಗಳನ್ನು ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಮುಖ್ಯಮಂತ್ರಿಯವರೊಂದಿಗೆ ತಾವು ಈಗಾಗಲೇ ಮಳೆ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿದ್ದು, ಬಹಳ ಮುಖ್ಯವಾದ ಜಂಕ್ಷನ್. ಇಲ್ಲಿಂದ ಸಮಸ್ಯೆ ಆರಂಭವಾಗಿ ನಂತರ ಉಳಿದ ಪ್ರದೇಶಗಳಲ್ಲಿ ಸಮಸ್ಯೆಯಾಗುತ್ತಿದೆ. ಕೆಲವರು ನ್ಯಾಯಾಲಯದಿಂದ ತಡೆಯಾಜ್ಞೆ ತಂದು ಅಡ್ಡಿಪಡಿಸುತ್ತಿದ್ದಾರೆ. ಅಧಿಕಾರಿಗಳಿಗೂ ಸಹಕಾರ ನೀಡುತ್ತಿರಲಿಲ್ಲ. ಹೀಗಾಗಿ ಸಮಸ್ಯೆಗೆ ಕಾರಣವಾಗಿರುವ ಪ್ರದೇಶಗಳಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ ಅಡಿ ಕಟ್ಟಡ ತೆರವುಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ.

ಬಿಬಿಎಂಪಿ ಆಯುಕ್ತರು ಹಾಗೂ ಕಾರ್ಯದರ್ಶಿಗಳಿಗೆ ಈ ವಿಚಾರದಲ್ಲಿ ಇರುವ ಅಡಚಣೆಗಳನ್ನು ತೆರವುಗೊಳಿಸಲು ಸಂಪೂರ್ಣ ಅಧಿಕಾರ ನೀಡಲಾಗಿದೆ ಎಂದು ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

<><><><>

ಸುಪ್ರೀಂಕೋರ್ಟ್ ಕೊಲಿಜಿಯಂ ಮಾಡಿದ ಶಿಫಾರಸ್ಸಿನ ಮೇರೆಗೆ ಕೇಂದ್ರ ಸರ್ಕಾರದ ಮೂವರು ನ್ಯಾಯಾಧೀಶರ ನೇಮಕಕ್ಕೆ ಸುಪ್ರೀಂಕೋರ್ಟ್ ಅನುಮೋದನೆ ನೀಡಿದೆ.

ರಾಜ್ಯ ಹೈಕೋರ್ಟ್‌ನ ಹಾಲಿ ಮುಖ್ಯ ನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ, ಪ್ರಸ್ತುತ ಗುವಾಹಟಿ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಕಾರ್ಯನಿರ್ವಹಿಸುತ್ತಿರುವ ನ್ಯಾಯಮೂರ್ತಿ ವಿಜಯ್ ಬಿಷ್ಣೋಯ್, ಮತ್ತು ಬಾಂಬೆ ಹೈಕೋರ್ಟ್‌ನ ನ್ಯಾಯಮೂರ್ತಿ ಅತುಲ್ ಎಸ್. ಚಂದೂರ್ಕರ್ ಅವರನ್ನು ಸುಪ್ರೀಂ ಕೋರ್ಟ್ ನ್ಯಾಯಾಧೀಶರನ್ನಾಗಿ ನೇಮಕಕ್ಕೆ ರಾಷ್ಟ್ರಪತಿ ಅನುಮೋದನೆ ನೀಡಿದ್ದಾರೆ ಎಂದು ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಸಾಮಾಜಿಕ ಜಾಲ ತಾಣದಲ್ಲಿ ತಿಳಿಸಿದ್ದಾರೆ.

<><><><>